# ಕರ್ನಾಟಕ ಸರ್ಕಾರ
## ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/ವಿ.ಯೋ/31/Placement Cell/2014-15

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ: 11-09-2017.

### ಸುತ್ತೋಲೆ

ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು ದಿಂದ ಕರ್ನಾಟಕ ಸರ್ಕಾರದ ವಿವಿಧ ಇಲಾಖೆಗಳಲ್ಲಿರುವ ಪ್ರಥಮ ಹಾಗೂ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದ್ದಾರೆ.

Online ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ : 07-10-2017ರ ರಾತ್ರಿ 11-45 ಘಂಟೆ
ಪರೀಕ್ಷಾ ಶುಲ್ಕ ಪಾವತಿಸಲು ಕೊನೆಯ ದಿನಾಂಕ : 09-10-2017

**ಶುಲ್ಕ :**
ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳಿಗೆ : ರೂ. 300-00
ಪ್ರವರ್ಗ – 2 ಎ, ಬಿ, 3 ಎ, ಬಿ : ರೂ. 150-00
ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಅಂಗವಿಕಲ, ಮಾಜಿ ಸೈನಿಕ ಅಭ್ಯರ್ಥಿಗಳಿಗೆ : ವಿನಾಯ್ತಿ

**ವಿದ್ಯಾರ್ಹತೆ :**
ಪ್ರಥಮ ದರ್ಜೆ ಸಹಾಯಕರ ಹುದ್ದೆಗಳಿಗೆ : ವಿಶ್ವವಿದ್ಯಾಲಯದ ಪದವಿ ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು.
ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳಿಗೆ : ಕರ್ನಾಟಕ ಪದವಿ ಪೂರ್ವ ಶಿಕ್ಷಣ ಇಲಾಖೆಯು ನಡೆಸುವ ಪದವಿ ಪೂರ್ವ ಪರೀಕ್ಷೆ ಅಥವಾ ತತ್ಸಮಾನ ವಿದ್ಯಾರ್ಹತೆಗಳಾದ ಐಟಿಐ ಮತ್ತು ಇತರೆ ಮೂರು ವರ್ಷದ ಡಿಪ್ಲೋಮೋ ಕೋರ್ಸ್

**ವೇತನ ಶ್ರೇಣಿ :**
ಪ್ರಥಮ ದರ್ಜೆ ಸಹಾಯಕರು : 14550 – 26700/-
ದ್ವಿತೀಯ ದರ್ಜೆ ಸಹಾಯಕರು : 11600 – 21000/-

**ಸ್ಪರ್ಧಾತ್ಮಕ ಪರೀಕ್ಷೆಯ ಪಠ್ಯಕ್ರಮ:**

| ಪತ್ರಿಕೆ | ವಿಷಯ | ಅಂಕಗಳು | ಪರೀಕ್ಷಾ ಅವಧಿ | ಪರೀಕ್ಷಾ ವಿಧಾನ |
|---|---|---|---|---|
| ಪತ್ರಿಕೆ – 1 | ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ | 150 | 1-1/2 ಘಂಟೆ | ವಿವರಣಾತ್ಮಕ ಪತ್ರಿಕೆ |
| ಪತ್ರಿಕೆ – 2 | ಸಾಮಾನ್ಯ ಕನ್ನಡ/ ಇಂಗ್ಲೀಷ್ | 100 | 1-1/2 ಘಂಟೆ | ವಸ್ತು ನಿಷ್ಠ ಬಹು ಆಯ್ಕೆ ಪತ್ರಿಕೆ |
| ಪತ್ರಿಕೆ – 3 | ಸಾಮಾನ್ಯ ಜ್ಞಾನ | 100 | 1-1/2 ಘಂಟೆ | ವಸ್ತು ನಿಷ್ಠ ಬಹು ಆಯ್ಕೆ ಪತ್ರಿಕೆ |

ಹೆಚ್ಚಿನ ವಿವರಗಳಿಗೆ ಸಂಪರ್ಕಿಸಿ: http://kpsc.kar.nic.in

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಎಲ್ಲಾ ಅಂತಿಮ ವರ್ಷದ ವಿದ್ಯಾರ್ಥಿಗಳ, ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಂದ ಪದವಿ ಹೊಂದಿ ಉದ್ಯೋಗಾಸಕ್ತ ಪೂರ್ವ ವಿದ್ಯಾರ್ಥಿಗಳ ಹಾಗೂ ಸ್ನಾತಕೋತ್ತರ ಪದವಿಯಲ್ಲಿನ ವಿದ್ಯಾರ್ಥಿಗಳ ಗಮನಕ್ಕೆ ತರಲು, ಪರೀಕ್ಷೆಗೆ ಅರ್ಜಿಯನ್ನು ಹಾಕಲು ಪ್ರೋತ್ಸಾಹಿಸಲು ಹಾಗೂ ಸದರಿ ಪರೀಕ್ಷೆಗೆ ಅರ್ಜಿಗಳನ್ನು ಹಾಕುವ ವಿದ್ಯಾರ್ಥಿಗಳಿಗೆ ವಿಶೇಷ ಉಪನ್ಯಾಸ ಹಮ್ಮಿಕೊಳ್ಳಲು ಸೂಚಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು.

**ಇವರಿಗೆ:**

1) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಸೂಕ್ತ ಕ್ರಮಕ್ಕಾಗಿ.
2) ಎಲ್ಲಾ ಪ್ರವರ್ತಕ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಸೂಕ್ತ ಕ್ರಮಕ್ಕಾಗಿ.
3) ಸಂಬಂಧಪಟ್ಟ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ Placement Cell ನ ಸಂಚಾಲಕರು – ಸೂಕ್ತ ಕ್ರಮಕ್ಕಾಗಿ.

**ಪ್ರತಿಯನ್ನು:**

1) ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಮಂಗಳೂರು, ಧಾರವಾಡ, ಶಿವಮೊಗ್ಗ ಮತ್ತು ಕಲುಬುರ್ಗಿ – ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.
2) ಮಾಹಿತಿ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕಾಶಿಇ, ಬೆಂಗಳೂರು – ಇಲಾಖಾ ವೆಬ್ ಸೈಟಿನಲ್ಲಿ ಪ್ರಕಟಿಸಲು.
3) ಕಛೇರಿ ಪ್ರತಿ.